ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಸರ್ಕಾರದ ಆದೇಶ ಸಂಖ್ಯೆ: ನಅಇ 358 ಎಂಎನ್‌ವೈ 2023 (ಇ), ದಿನಾಂಕ: 11–12–2023 ರನ್ವಯ ಕೈಗೊಳ್ಳಲು ಉದ್ದೇಶಿಸಿರುವ "Drilling of borewells and providing pipeline and supply of drinking water to public in Harohalli, Nagenahalli, Kenchenahalli, Doddabettahalli, Chikkabettahalli, and Ananthapura village areas in ward No-01 and Ward No-03 of yelahanka Division" (ಕ್ರಮ ಸಂಖ್ಯೆ: 01) ಪ್ಯಾಕೇಜಿನ ಕಾಮಗಾರಿಯ ರೂ.3.00 ಕೋಟಿಗಳ ಟೆಂಡರ್‌ಗೆ ಅನುಮೋದನೆ ನೀಡುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ನಅಇ 358 ಎಂಎನ್‌ವೈ 2023 (ಇ), ದಿನಾಂಕ: 11–12–2023.
2. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಪತ್ರ ಸಂಖ್ಯೆ: ಮುಆ/ಪಿಆರ್/(G)3676/2023-24, ದಿನಾಂಕ: 02–03–2024.
3. ದಿನಾಂಕ: 11–03–2024 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿ.

* * * * *

ಪ್ರಸ್ತಾವನೆ:

ಮೇಲೆ ಕ್ರಮ ಸಂಖ್ಯೆ (1) ರಲ್ಲಿ ಓದಲಾದ ದಿನಾಂಕ: 11–12–2023ರ ಆದೇಶದಲ್ಲಿ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ 2022–23ಕ್ಕೆ ನೀರು ಸರಬರಾಜು, ನೈರ್ಮಲ್ಯ ಮತ್ತು ಘನತ್ಯಾಜ್ಯ ನಿರ್ವಹಣೆಗಾಗಿ ಬಿಡುಗಡೆಯಾಗಿರುವ ರೂ.291.00 ಕೋಟಿಗಳಲ್ಲಿ ಕೆಲವು ಸೂಕ್ಷ್ಮ ಮಟ್ಟದ ಕ್ರಿಯಾ ಯೋಜನೆ (Micro Level Action Plan) ಕಾಮಗಾರಿಗಳ ಪಟ್ಟಿಗೆ ಕೆಲವು ಷರತ್ತುಗಳಿಗೊಳಪಟ್ಟು ಸರ್ಕಾರವು ಅನುಮೋದನೆ ನೀಡಿ ಆದೇಶಿಸಲಾಗಿರುತ್ತದೆ. ಸದರಿ ಆದೇಶದಲ್ಲಿನ Part-B Water Supply ಕ್ರಮ ಸಂಖ್ಯೆ: 01ರ ಕಾಮಗಾರಿಗೆ ರೂ.20.00 ಕೋಟಿಗಳ ಅನುದಾನ ನಿಗಧಿಪಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ (2) ರಲ್ಲಿ ಓದಲಾದ ದಿನಾಂಕ: 02–03–2024ರ ಪತ್ರದಲ್ಲಿ, ಮುಖ್ಯ ಆಯುಕ್ತರು, ಬಿಬಿಎಂಪಿ ರವರು 2022–23ನೇ ಸಾಲಿನ 15ನೇ ಹಣಕಾಸು ಯೋಜನೆಯಡಿಯಲ್ಲಿ ಸರ್ಕಾರದ ಆದೇಶ ಸಂಖ್ಯೆ: ನಆಇ 358 ಎಂಎನ್‌ವೈ 2023(ಇ) ಬೆಂಗಳೂರು ದಿನಾಂಕ: 11–12–2023 ರಂತೆ ಬಿಡುಗಡೆಯಾಗಿರುವ ರೂ.291.00 ಕೋಟಿಗಳ ಕ್ರಿಯಾ ಯೋಜನೆಯಡಿಯಲ್ಲಿ ನೀರು ಸರಬರಾಜು ಭಾಗ–ಬಿ

ಕ್ರಮ ಸಂಖ್ಯೆ: 2 ರಲ್ಲಿ Supply of Drinking water to Public in BBMP during summer–2024 ಗಾಗಿ ಕೊಳವೆ ಭಾವಿಗಳಿಗೆ ಮೀಸಲಿಟ್ಟಿರುವ ರೂ.20.00 ಕೋಟಿಗಳ ಅನುದಾನದಡಿಯಲ್ಲಿ ಮೈಕ್ರೋ ಲೆವೆಲ್ ಆಕ್ಷನ್ ಪ್ಲಾನ್ ನಲ್ಲಿ ಮಂಜೂರಾಗಿರುವ ಕಾಮಗಾರಿಗಳಲ್ಲಿ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಯಲಹಂಕ ವಿಧಾನ ಸಭಾ ಕ್ಷೇತ್ರದ ವ್ಯಾಪ್ತಿಗೆ ಒಳಪಡುವ ವಾರ್ಡ್ ನಂ–01 ಮತ್ತು 03ರಲ್ಲಿ ಕುಡಿಯುವ ನೀರು ಸರಬರಾಜು ಕಾಮಗಾರಿಗಳಿಗೆ ದಿನಾಂಕ:03–02–2024 ರಂದು ದ್ವಿ–ಲಕೋಟೆ ಏಕಕಕ ರಡಿಯಲ್ಲಿ ರೂ.255.43 ಲಕ್ಷಗಳಿಗೆ (ಟೆಂಡರ್‌ಗಿಟ್ಟ ಮೊತ್ತ) ಟೆಂಡರ್ ಆಹ್ವಾನಿಸಲಾಗಿರುತ್ತದೆ. ಸದರಿ ಕಾಮಗಾರಿಯ ತಾಂತ್ರಿಕ ಬಿಡ್‌ನ್ನು ದಿನಾಂಕ: 19–02–2024 ರಂದು ತೆರೆಯಲಾಗಿದ್ದು, ಟೆಂಡರ್ ಪ್ರಕ್ರಿಯೆಯಲ್ಲಿ ಇಬ್ಬರು ಬಿಡ್‌ದಾರರು ಭಾಗವಹಿಸಿದ್ದು ವಿವರ ಕೆಳಕಂಡಂತಿರುತ್ತದೆ.

ಕ್ರ ಸಂ	ಕಾಮಗಾರಿಯ / ಯೋಜನೆಯ ಹೆಸರು	ಅಂದಾಜು ಮೊತ್ತ ರೂ. (ಲಕ್ಷಗಳಲ್ಲಿ)	ಟೆಂಡರ್‌ಗಿಟ್ಟ ಮೊತ್ತ ರೂ. (ಲಕ್ಷಗಳಲ್ಲಿ)	ಟೆಂಡರ್‌ನಲ್ಲಿ ಭಾಗವಹಿಸಿರುವ ಗುತ್ತಿಗೆದಾರರು	ಷರಾ
1	Drilling of borewells and providing pipeline and supply of drinking water to public in Harohalli, Nagenahalli, Kenchenahalli, Doddabettahalli, Chikkabettahalli, and Ananthapura village areas in ward No-01 and Ward No-03 of yelahanka Division	300.00	255.43	B P Mahesh (M/s Sri Sai Manjunatha Enterprises)	Technically Qualified
				K R Santhosh kumar	Technically Qualified

ಬಿಡ್‌ದಾರರಾದ 1) Sri. Shadayan (M/s Ganesh Engineering works) & 2) K R Santhosh kumar ರವರು ತಾಂತ್ರಿಕವಾಗಿ ಅರ್ಹತೆ ಹೊಂದಿರುವುದರಿಂದ ದಿನಾಂಕ: 27–02–2024 ರಂದು ಮುಖ್ಯ ಆಯುಕ್ತರ ಅಧ್ಯಕ್ಷತೆಯಲ್ಲಿರುವ ತಾಂತ್ರಿಕ ಮೌಲ್ಯಮಾಪನ ಸಮಿತಿಯು ತಾಂತ್ರಿಕ ಬಿಡ್‌ಗೆ ಅನುಮೋದನೆ ಹಾಗೂ ಆರ್ಥಿಕ ಬಿಡ್‌ನ್ನು ತೆರೆಯಲು ಅನುಮೋದನೆ ನೀಡಿರುವಂತೆ ದಿನಾಂಕ:27–02–2024 ರಂದು ಆರ್ಥಿಕ ಬಿಡ್‌ಅನ್ನು ತೆರೆಯಲಾಗಿದ್ದು, ವಿವರ ಈ ಕೆಳಕಂಡಂತಿದೆ.

ಕ್ರ. ಸಂ	ಗುತ್ತಿಗೆದಾರರ ಹೆಸರು	ಟೆಂಡರ್‌ಗಿಟ್ಟ ಮೊತ್ತ 2023–24 ರ ಅನುಮೋದಿತ ದರಗಳಿಗೆ ಹೊಲಿಸಿದಾಗ	ಗುತ್ತಿಗೆದಾರರು ನಮೂದಿಸಿರುವ ದರಗಳು	2023–24 ನೇ ಸಾಲಿನ ಎಸ್.ಆರ್‌ಧರಗಳಿಗೆ ಹೋಲಿಸಿದಾಗ ಶೇಕಡವಾರು	ಷರಾ
01	B P Mahesh (M/s Sri Sai Manjunatha Enterprises)	2,55,43,712.89	2,67,95,426.35	(+)4.90%	L-1
02	K R Santhosh kumar		2,70,76,303.87	(+)6.07%	L-2

ಸದರಿ ಟೆಂಡರ್‌ನಲ್ಲಿ ಕನಿಷ್ಟ ದರ ನಮೂದಿಸಿರುವ ಗುತ್ತಿಗೆದಾರರಾದ Sri. B P Mahesh (M/s Sri Sai Manjunath Enterprises) ರವರು ರೂ.2,67,95,426.35 ಗಳನ್ನು ನಮೂದಿಸಿರುತ್ತಾರೆ. ಈ ಮೊತ್ತವನ್ನು ಕರ್ನಾಟಕ ಲೋಕೋಪಯೋಗಿ 2023–24ನೇ ದರಪಟ್ಟಿ ದರಗಳಿಗೆ ಹೋಲಿಸಿದಾಗ ಶೇ(+)4.90% ರಷ್ಟು ಹೆಚ್ಚಾಗಿರುತ್ತದೆ. ಸದರಿ ಗುತ್ತಿಗೆದಾರರು ನಮೂದಿಸಿರುವ ದರಗಳಿಗೆ ಅನುಮೋದನೆ ಕೋರಿ ಆರ್ಥಿಕ ಮೌಲ್ಯಮಾಪನ ಸಮಿತಿ ಮುಂದೆ ಮಂಡಿಸಲಾಗಿದ್ದು, ಅದರಂತೆ ದಿನಾಂಕ: 01–03–2024 ರಂದು ತಾಂತ್ರಿಕ ಮೌಲ್ಯ ಮಾಪನ / ಆರ್ಥಿಕ ಮೌಲ್ಯ ಮಾಪನ ಮತ್ತು ದರ ಸಂಧಾನ ಸಮಿತಿಯಲ್ಲಿ ಚರ್ಚಿಸಿದಂತೆ 15ನೇ ಹಣಕಾಸು ಆಯೋಗದ ಅನುದಾನದಡಿಯಲ್ಲಿ ಕೈಗೊಳ್ಳುವ ಕಾಮಗಾರಿಗಳ ಟೆಂಡರ್ ಪ್ರೀಮಿಯಂ ಅನ್ನು ಎಸ್.ಆರ್. ದರಗಳಿಗೆ ಮಿತಿಗೊಳಿಸುವಂತೆ ಸೂಚಿಸಿದ್ದು, ಅದರಂತೆ ಗುತ್ತಿಗೆದಾರರಾದ Sri. B P Mahesh (M/s Sri Sai Manjunath Enterprises) ರವರಿಗೆ ತಿಳಿಸಲಾಗಿದ್ದು, ಸದರಿಯವರು ಎಸ್.ಆರ್. ದರಗಳಿಗೆ ಕಾಮಗಾರಿಯನ್ನು ನಿರ್ವಹಿಸಲು ಒಪ್ಪಿ ದಿನಾಂಕ: 1–3–2024 ರಂದು ಈ ಕಛೇರಿಗೆ ಪತ್ರ ನೀಡಿರುತ್ತಾರೆ.

ಗುತ್ತಿಗೆದಾರರೊಂದಿಗೆ ದರ ಸಂಧಾನದ ನಡೆಸಿರುವಂತೆ ವಿವರಗಳು ಈ ಕೆಳಕಂಡಂತಿದೆ.

Sl No	Before Negotiation		After Negotiation	
01	ಗುತ್ತಿಗೆದಾರರು ನಮೂದಿಸಿರುವ ದರಗಳು	2023–24ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು	ದರ ಸಂದಾನದ ನಂತರ ಗುತ್ತಿಗೆದಾರರು ನಮೂದಿಸಿರುವ ದರಗಳು	2023–24ನೇ ಸಾಲಿನ ಎಸ್.ಆರ್ ದರಗಳಿಗೆ ಹೋಲಿಸಿದಾಗ ಶೇಕಡವಾರು
	2,67,95,426.35	(+)4.90%	2,55,43,712.89	ಎಸ್.ಆರ್.ದರಗಳು

ಈ ಮೇಲ್ಕಂಡ ವಿವರಗಳಂತೆ ದರಸಂದಾನದ ನಂತರ ಗುತ್ತಿಗೆದಾರರಾದ Sri. B P Mahesh (M/s Sri Sai Manjunath Enterprises) ರವರು ರೂ. 2,55,43,712.89 ಗಳನ್ನು ನಮೂದಿಸಿರುತ್ತಾರೆ. ಈ ಮೊತ್ತವನ್ನು ಕರ್ನಾಟಕ ಲೋಕೋಪಯೋಗಿ 2023–24ನೇ ದರಪಟ್ಟಿ ದರಗಳಿಗೆ ಹೋಲಿಸಿದಾಗ ಎಸ್.ಆರ್.ದರಗಳಾಗಿರುತ್ತವೆ.

ದಿನಾಂಕ: 24–02–2024ರಂದು ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ನಗರಾಭಿವೃದ್ಧಿ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ತಿರ್ಮಾನಿಸಿದಂತೆ ರಾಜ್ಯದಲ್ಲಿ ಈಗಾಗಲೇ ಬರಗಾಲ ಘೋಷಣೆಯಾಗಿದ್ದು, ಹಾಗೂ ಬೇಸಿಗೆ ಸಮೀಪಿಸುತ್ತಿರುವುದರಿಂದ ಕುಡಿಯುವ ನೀರಿಗೆ ಅಭಾವ ಉಂಟಾಗುವ ಸಾದ್ಯತೆ ಹೆಚ್ಚಾಗಿರುವುದರಿಂದ, ಕನಿಷ್ಟ ದರ ನಮೂದಿಸಿರುವ ಬಿಡ್‌ದಾರರಿಗೆ ಕೂಡಲೇ ಕಾರ್ಯಾದೇಶ ನೀಡಿ ಕಾಮಗಾರಿಯನ್ನು ಪ್ರಾರಂಬಿಸಲು ತಿಳಿಸಲಾಗಿದ್ದು, ಅದರಂತೆ Sri. B P Mahesh (M/s Sri Sai Manjunath Enterprises) ರವರು ನಮೂದಿಸಿರುವ ಟೆಂಡರ್‌ನ ಮೊತ್ತ

ರೂ. 2,55,43,712.89 ಗಳಿಗೆ (ಎಸ್.ಆರ್.ದರಗಳು) ಘನ ಸರ್ಕಾರದಿಂದ ಘಟನೋತ್ತರ ಟೆಂಡರ್ ಹಾಗೂ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಕೋರಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಮೇಲೆ ಕ್ರಮ ಸಂಖ್ಯೆ (3) ರಲ್ಲಿ ಓದಲಾದ ದಿನಾಂಕ: 11–03–2024 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ಮುಂದೆ ಬಿ.ಬಿ.ಎಂ.ಪಿ. ಮುಖ್ಯ ಆಯುಕ್ತರ ದಿನಾಂಕ: 02–03–2024ರ ಪ್ರಸ್ತಾವನೆಯನ್ನು ಮಂಡಿಸಲಾಗಿದ್ದು, ಅಧಿಕಾರಯುಕ್ತ ಸಮಿತಿ ಸಭೆಯಲ್ಲಿ, ವಿಷಯಗಳನ್ನು ಚರ್ಚಿಸಿ ಈ ಕೆಳಕಂಡಂತೆ ನಿರ್ಣಯಿಸಲಾಗಿದೆ.

"ವಿವರವಾದ ಚರ್ಚೆಯ ನಂತರ, "Drilling of borewells & Providing pipe line and supply of drinking water to public in Harohalli, Nagenahalli, Kenchanahalli, Doddabettahalli, Chikkabettahalli and Ananthpura village areas in ward No 01 and Ward No 03 of Yelahanka Division" ಕಾಮಗಾರಿಯ ಅಂದಾಜು ಮೊತ್ತಕ್ಕೆ ಆಡಳಿತಾತ್ಮಕ ಅನುಮೋದನೆ ನೀಡಿ, Sri BP.Mahesh (M/s.Sri.Sai.Manjunatha Enterprises) ರವರ ಬಿಡ್ಡನ್ನು 2023–24ನೇ ಸಾಲಿನ ದರಗಳಿಗೆ ಟೆಂಡರ್‌ಗಿಟ್ಟ ಮೊತ್ತವಾದ ರೂ.2,99,76,418.97 (2,54,03,744.89 + 45,72,674.08 ಜಿಎಸ್‌ಟಿ) ಗಳಿಗೆ ಸಮನಾದ ಅಂದರೆ, ರೂ.2,99,76,418.00 (2,54,03,744.00 + 45,72,674.00 ಜಿಎಸ್‌ಟಿ) ಗಳ ಸಂಧಾನಿತ ಮೊತ್ತಕ್ಕೆ ಅನುಮೋದಿಸಲು ಹಾಗೂ ರೂ.20.00 ಕೋಟಿ ಮೊತ್ತದ ಏಕ ಕಾಮಗಾರಿಯನ್ನು ವಿವಿಧ ಕಾಮಗಾರಿಗಳಾಗಿ ರೂಪಿಸಿ ಟೆಂಡರ್ ಕರೆದಿರುವ ಕ್ರಮವನ್ನು ಮುಖ್ಯ ಆಯುಕ್ತರು, ಮತ್ತು ಸಂಬಂಧಪಟ್ಟ ಮುಖ್ಯ ಅಭಿಯಂತರರು, ಬಿಬಿಎಂಪಿ (ಬೆಂಗಳೂರು ಅಭಿವೃದ್ಧಿ) ರವರು ನೀಡಿದ ವಿವರಣೆಯನ್ನು ಪರಿಗಣಿಸಿ ಸ್ಥಿರೀಕರಣಕ್ಕಾಗಿ, ಮಾನ್ಯ ಉಪ–ಮುಖ್ಯಮಂತ್ರಿಗಳ ಅನುಮೋದನೆಗೆ ಸಲ್ಲಿಸಲು ಸರ್ವಾನುಮತದಿಂದ ತೀರ್ಮಾನಿಸಲಾಯಿತು."

ದಿನಾಂಕ: 11–03–2024 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ ಈ ಆದೇಶ.

ಸರ್ಕಾರದ ಆದೇಶ ಸಂಖ್ಯೆ: ನಅಇ 163 ಎಂಎನ್‌ವೈ 2024 (ಇ),
ಬೆಂಗಳೂರು, ದಿನಾಂಕ: 12–03–2024.

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ, ಸರ್ಕಾರದ ಆದೇಶ ಸಂಖ್ಯೆ: ನಅಇ 358 ಎಂಎನ್‌ವೈ 2023 (ಇ), ದಿನಾಂಕ: 11–12–2023ರ ಕ್ರಿಯಾಯೋಜನೆಯ Part-B (Water Supply) ಕ್ರಮ ಸಂಖ್ಯೆ: 01ರ ಕಾಮಗಾರಿಯನ್ನೊಳಗೊಂಡು ಮಾಡಲಾಗಿರುವ "Drilling of borewells & Providing pipe line and supply of drinking water to public in Harohalli, Nagenahalli, Kenchanahalli, Doddabettahalli, Chikkabettahalli and Ananthpura village areas in ward No 01 and Ward No 03 of Yelahanka Division" ಪ್ಯಾಕೇಜಿನ ರೂ.3.00 ಕೋಟಿಗಳ ಅಂದಾಜು ಮೊತ್ತಕ್ಕೆ

Scanned with OKEN Scanner

ಆಡಳಿತಾತ್ಮಕ ಅನುಮೋದನೆ ನೀಡಿ, ದಿನಾಂಕ: 11-03-2024 ರಂದು ನಡೆದ ಅಧಿಕಾರಯುಕ್ತ ಸಮಿತಿ ಸಭೆಯ ನಿರ್ಣಯದಂತೆ Sri BP.Mahesh (M/s.Sri.Sai.Manjunatha Enterprises) ರವರ ಬಿಡ್ಡನ್ನು 2023-24ನೇ ಸಾಲಿನ ದರಗಳಿಗೆ ಟೆಂಡರ್‌ಗಿಟ್ಟ ಮೊತ್ತವಾದ ರೂ.2,99,76,418.97 (2,54,03,744.89 + 45,72,674.08 ಜಿಎಸ್‌ಟಿ) ಗಳಿಗೆ ಸಮನಾದ ಅಂದರೆ, ರೂ.2,99,76,418.00 (2,54,03,744.00 + 45,72,674.00 ಜಿಎಸ್‌ಟಿ) (ಎರಡು ಕೋಟಿ ತೊಂಭತ್ತೊಂಭತ್ತು ಲಕ್ಷದ ಎಪ್ಪತ್ತಾರು ಸಾವಿರದ ನಾಲ್ಕುನೂರ ಎಪ್ಪತ್ತ ನಾಲ್ಕು ರೂಪಾಯಿಗಳು ಮಾತ್ರ) ಗಳ ಸಂಧಾನಿತ ಮೊತ್ತದ ಟೆಂಡರ್‌ಗೆ ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಅನುಮೋದನೆ ನೀಡಿ ಆದೇಶಿಸಿದೆ.

ಷರತ್ತುಗಳು:

1. ಕಾಮಗಾರಿಗಳಿಗೆ ಅನುಮೋದನೆ ನೀಡಿರುವ ಟೆಂಡರ್ ಮೊತ್ತಕ್ಕೆ ಬಿಡ್‌ದಾರರು ಒಪ್ಪದ ಪಕ್ಷದಲ್ಲಿ ಮರು ಟೆಂಡರ್ ಕರೆಯುವುದು.
2. ಈ ಕಾಮಗಾರಿಗೆ ತಗಲುವ ವೆಚ್ಚವನ್ನು ಸರ್ಕಾರದ ಆದೇಶ ಸಂಖ್ಯೆ: ನಅಇ 358 ಎಂಎನ್‌ವೈ 2023 (ಇ), ದಿನಾಂಕ: 11-12-2023 ರಲ್ಲಿ ಮೀಸಲಿಟ್ಟಿರುವ ಅನುದಾನದಲ್ಲಿ ಭರಿಸುವುದು.
3. ಮೇಲಿನ ಕಾಮಗಾರಿಗಳನ್ನು ಕೆ.ಟಿ.ಪಿ.ಪಿ. ಕಾಯ್ದೆ / ನಿಯಮಗಳು ಹಾಗೂ ಎಲ್ಲಾ ಚಾಲ್ತಿ ನಿಯಮಗಳನ್ನು ಕಡ್ಡಾಯವಾಗಿ ಪಾಲಿಸಿರುವುದನ್ನು ಬಿಬಿಎಂಪಿ ಮುಖ್ಯ ಆಯುಕ್ತರು ಖಚಿತಪಡಿಸಿಕೊಂಡು ಅನುಷ್ಠಾನಗೊಳಿಸುವುದು.
4. ಮೇಲಿನ ಕಾಮಗಾರಿಯನ್ನು ಸರ್ಕಾರದಿಂದ ಮಂಜೂರಾದ ಮೊತ್ತದ ಮಿತಿಯಲ್ಲಿಯೇ ಯಾವುದೇ ಹೆಚ್ಚುವರಿಯಾಗದಂತೆ ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು ಹಾಗೂ ಹೆಚ್ಚುವರಿ ಟೆಂಡರ್ ಪ್ರೀಮಿಯಂ ಅನ್ನು ಬಿಬಿಎಂಪಿಯ ಸ್ವಂತ ಸಂಪನ್ಮೂಲದಿಂದ ಭರಿಸತಕ್ಕದ್ದು.
5. ಕರ್ನಾಟಕ ಆರ್ಥಿಕ ಸಂಹಿತೆ 1958 ಸಾಧಿಲ್ವಾರು ವೆಚ್ಚ ಕೈಪಿಡಿ ಅಧಿನಿಯಮ ಹಾಗೂ ಕಾಲಕಾಲಕ್ಕೆ ಚಾಲ್ತಿಯಲ್ಲಿರುವ ಎಲ್ಲಾ ಕಾಯ್ದೆ ನಿಯಮಗಳನುಸಾರ ಕ್ರಮವಹಿಸತಕ್ಕದ್ದು.
6. ಮೇಲಿನ ಕಾಮಗಾರಿಗೆ 3rd Party Quality Monitors ಗಳನ್ನು ನೇಮಿಸಿಕೊಂಡು ಉತ್ತಮ ಗುಣಮಟ್ಟದಿಂದ ಕಾಮಗಾರಿಯನ್ನು ಅನುಷ್ಠಾನಗೊಳಿಸಲು ಕ್ರಮ ವಹಿಸತಕ್ಕದ್ದು.
7. ಈ ಕ್ರಿಯಾ ಯೋಜನೆಯಲ್ಲಿ ಒಳಗೊಂಡಿರುವ ಕಾಮಗಾರಿಗಳು ಇತರೆ ಯಾವುದೇ ಯೋಜನೆ / ಅನುದಾನದಡಿಯಲ್ಲಿ ಪುನರಾವರ್ತನೆ ಆಗಿರುವುದಿಲ್ಲ ಎಂಬ ಬಗ್ಗೆ ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಪೂರ್ವಾನ್ವಯವಾಗಿ ಖಚಿತಪಡಿಸಿಕೊಳ್ಳುವುದು.

8. ದಿನಾಂಕ: 11-03-2024ರ ಅಧಿಕಾರಯುಕ್ತ ಸಮಿತಿ ಸಭೆಯ ನಡವಳಿಯಲ್ಲಿ ನಮೂದಿಸಿರುವ ಎಲ್ಲಾ ಷರತ್ತು ಹಾಗೂ ನಿಬಂಧನೆಗಳನ್ನು ತಪ್ಪದೆ ಪಾಲಿಸತಕ್ಕದ್ದು.

9. ಸದರಿ ಬಿಡ್ದುದಾರರು ಅಥವಾ ಇನ್ಯಾವುದೇ ಹಂತದಲ್ಲಿ ತಪ್ಪು ಮಾಹಿತಿ / ದಾಖಲೆ ನೀಡಿರುವುದು ಕಂಡುಬಂದಲ್ಲಿ ಟೆಂಡರ್‌ಅನ್ನು ರದ್ದುಪಡಿಸಲು ಬಿಬಿಎಂಪಿ ಮುಖ್ಯ ಆಯುಕ್ತರು ನಿಯಮಾನುಸಾರ ಕ್ರಮ ವಹಿಸುವುದು.

10. ಮುಖ್ಯ ಆಯುಕ್ತರು, ಬಿಬಿಎಂಪಿ ರವರು ಟ್ಯಾಂಕರ್ ಕುಡಿಯುವ ನೀರು ಸರಬರಾಜು ಸಂಬಂಧ ಬಿಬಿಎಂಪಿ ವ್ಯಾಪ್ತಿಯಲ್ಲಿನ ದರಗಳಲ್ಲಿ ಏಕರೂಪತೆಯನ್ನು ಕಾಪಾಡುವುದು.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲಕ್ಷ್ಮೀಸಾಗರ್ ಬಿಎಸ್.ಕೆ.)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ (ಬಿ.ಬಿ.ಎಂ.ಪಿ.)

ಇವರಿಗೆ:

1) ಮಹಾಲೇಖಪಾಲರು, ಲೆಕ್ಕ ತಪಾಸಣೆ/ಲೆಕ್ಕಪತ್ರ, ಕರ್ನಾಟಕ ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಮಾನ್ಯ ಮುಖ್ಯಮಂತ್ರಿಯವರ ಅಪರ ಮುಖ್ಯ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
4) ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
5) ವಿಶೇಷ ಆಯುಕ್ತರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
6) ಮಾನ್ಯ ಉಪ ಮುಖ್ಯಮಂತ್ರಿಯವರ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7) ಪ್ರಧಾನ ಅಭಿಯಂತರರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
8) ಮಾನ್ಯ ಉಪ ಮುಖ್ಯಮಂತ್ರಿಯವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
9) ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
10) ಮುಖ್ಯ ಅಭಿಯಂತರರು (ಯೋಜನೆ), ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಬೆಂಗಳೂರು.
11) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ನಗರಾಭಿವೃದ್ಧಿ ಇಲಾಖೆ, ಬೆಂಗಳೂರು.
12) ಸರ್ಕಾರದ ವಿಶೇಷ ಕಾರ್ಯದರ್ಶಿಯವರ ಆಪ್ತ ಸಹಾಯಕರು, ನಗರಾಭಿವೃದ್ಧಿ ಇಲಾಖೆ (ಬಿಬಿಎಂಪಿ ಮತ್ತು ಸಮನ್ವಯ), ಬೆಂಗಳೂರು.
13) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.